# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | | 969 (974) |
| ಸದಸ್ಯರ ಹೆಸರು | | ಶ್ರೀ ಅ. ದೇವೇಗೌಡ (ಪದವೀಧರರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | | 15.03.2021 |
| ಉತ್ತರಿಸಬೇಕಾದ ಸಚಿವರು | | ಉಪ ಮುಖ್ಯಮಂತ್ರಿಗಳು (ಉನ್ನತ ಶಿಕ್ಷಣ) |
| ಪ್ರಶ್ನೆ | | ಉತ್ತರ |
| (ಅ) | ರಾಜ್ಯದಲ್ಲಿರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಸಂಖ್ಯೆ ಎಷ್ಟು; | ರಾಜ್ಯದಲ್ಲಿ ಕಾಲೇಜು ಶಿಕ್ಷಣ ಇಲಾಖೆ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಸಂಖ್ಯಾ ವಿವರ ಕೆಳಕಂಡಂತಿದೆ; (ಕೆಳಗಿನ ಕೋಷ್ಟಕ ನೋಡಿ) |
| (ಆ) | ಸದರಿ ಕಾಲೇಜುಗಳಲ್ಲಿ ಹಾಲಿ ಖಾಲಿ ಇರುವ ಉಪನ್ಯಾಸಕರುಗಳ ಹುದ್ದೆಗಳು ಎಷ್ಟು; | ಸದರಿ ಕಾಲೇಜುಗಳಲ್ಲಿ ಹಾಲಿ ಖಾಲಿ ಇರುವ ಉಪನ್ಯಾಸಕರ ಹುದ್ದೆಗಳ ಸಂಖ್ಯೆ: 1493. |
| ಇ) | ಸದರಿ ಕಾಲೇಜುಗಳಲ್ಲಿ ಹಾಲಿ ಖಾಲಿ ಇರುವ ಉಪನ್ಯಾಸಕರ ಈ ಹುದ್ದೆಗಳನ್ನು ಭರ್ತಿ ಮಾಡಲು ತೆಗೆದು ಕೊಳ್ಳಲಾಗಿರುವ ಕ್ರಮವೇನು? | ಕಾಲೇಜು ಶಿಕ್ಷಣ ಇಲಾಖಾ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿದ್ದ 412 ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಿಗೆ ಮಂಜೂರಾಗಿದ್ದ, 7257 ಸಹಾಯಕ ಪ್ರಾಧ್ಯಾಪಕರ ಹುದ್ದೆಗಳಲ್ಲಿ 6343 ಹುದ್ದೆಗಳು ಭರ್ತಿಯಾಗಿದ್ದು, ಉಳಿದಂತೆ ಅಂದು ಖಾಲಿ ಇದ್ದ 914 ಹುದ್ದೆಗಳು ಸೇರಿದಂತೆ ಹೊಸದಾಗಿ 328 ಹುದ್ದೆಗಳನ್ನು ಸೃಜನೆ ಮಾಡಿ ಒಟ್ಟು-1242 ಸಹಾಯಕ ಪ್ರಾಧ್ಯಾಪಕರ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರವು ಅನುಮತಿ ನೀಡಲಾಗಿದೆ.<br><br>ಒಟ್ಟು-1242 ಸಹಾಯಕ ಪ್ರಾಧ್ಯಾಪಕರ ಹುದ್ದೆಗಳನ್ನು ಭರ್ತಿ ಮಾಡಲು ವಿಶೇಷ ನೇಮಕಾತಿ ನಿಯಮಾವಳಿಗಳನ್ನು ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ/ 257 / ಡಿಸಿಇ / 2019 (ಭಾ-3), ದಿನಾಂಕ: 08.07.2020 ರಲ್ಲಿ ಹೊರಡಿಸಲಾಗಿದೆ. |

| ಕ್ರ. ಸಂ. | ಕಾಲೇಜುಗಳು | ಸಂಖ್ಯೆ |
|---|---|---|
| 1 | ಪದವಿ ಕಾಲೇಜುಗಳು | 423 |
| 2 | ಕಾನೂನು ಕಾಲೇಜುಗಳು | 06 |
| 3 | ಚಿತ್ರಕಲಾ ಕಾಲೇಜುಗಳು | 02 |
| | ಒಟ್ಟು | 431 |

| | | | |
|---|---|---|---|
| | | | ಮುಂದುವರೆದು, ಪ್ರಸ್ತುತ ಕೋವಿಡ್-19 ಹಿನ್ನೆಲೆಯಲ್ಲಿ 2020-21 ನೇ ಸಾಲಿನಲ್ಲಿ ಯಾವುದೇ ನೇರ ನೇಮಕಾತಿಯನ್ನು ಕೈಗೊಳ್ಳುವಂತಿಲ್ಲ ಎಂಬುದಾಗಿ ಆರ್ಥಿಕ ಇಲಾಖೆಯ ಸುತ್ತೋಲೆ ಸಂಖ್ಯೆ:ಆಇ/03/ ಬಿಇಎಂ/2020, ದಿನಾಂಕ:06.07.2020 ರಲ್ಲಿ ಸೂಚಿಸಲಾಗಿರುತ್ತದೆ.<br><br>ಆದಾಗ್ಯೂ, ಈಗಾಗಲೇ ಆರ್ಥಿಕ ಇಲಾಖೆಯು ಅನುಮತಿ ನೀಡಿರುವ 1242 ಸಹಾಯಕ ಪ್ರಾಧ್ಯಾಪಕರ ಖಾಲಿ ಹುದ್ದೆಗಳನ್ನು ಭರ್ತಿ ಮಾಡುವ ಸಂಬಂಧ ನೇಮಕಾತಿ ಪ್ರಕ್ರಿಯೆಯನ್ನು ಕೈಗೊಳ್ಳಲು ಅನುಮತಿ ನೀಡುವಂತೆ ಆರ್ಥಿಕ ಇಲಾಖೆಯನ್ನು ಕೋರಲಾಗಿತ್ತು. ಈ ಸಂಬಂಧ ಆರ್ಥಿಕ ಇಲಾಖೆಯು ನೇಮಕಾತಿ ಪ್ರಕ್ರಿಯೆಯನ್ನು ಪ್ರಸಕ್ತ ಸಾಲಿಗೆ ಆರ್ಥಿಕ ಇಲಾಖೆಯ ಸುತ್ತೋಲೆ ಸಂಖ್ಯೆ:ಆಇ/03/ಬಿಇಎಂ/2020, ದಿನಾಂಕ: 06.07.2020 ರನ್ವಯ ತಡೆಹಿಡಿಯಲಾಗಿದೆ ಎಂಬುದಾಗಿ ತಿಳಿಸಲಾಗಿರುತ್ತದೆ.<br><br>ಆದ್ದರಿಂದ ಆರ್ಥಿಕ ಇಲಾಖೆಯು ವಿಧಿಸಿರುವ ನಿರ್ಬಂಧವನ್ನು ತೆರವುಗೊಳಿಸಿ, ಹುದ್ದೆ ಭರ್ತಿಗೆ ಅನುಮತಿ ನೀಡಿದ ನಂತರ ಸದರಿ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ನಿಯಮಾನುಸಾರ ಕ್ರಮ ವಹಿಸಲಾಗುವುದು. |

ಇಡಿ 62 ಡಿಸಿಇ 2021

(ಡಾ. ಅಶ್ವಥ್ ನಾರಾಯಣ ಸಿ.ಎನ್.)
ಉಪ ಮುಖ್ಯಮಂತ್ರಿಗಳು (ಉನ್ನತ ಶಿಕ್ಷಣ)